# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1174 (1495)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಕಳಪೆ ಗುಣಮಟ್ಟದಿಂದ ಕೂಡಿದ ಕಾಮಗಾರಿಗಳ ಬಗ್ಗೆ

(ಅ) ಲೋಕೋಪಯೋಗಿ ಇಲಾಖೆಯ ವತಿಯಿಂದ ಲೆಕ್ಕ ಶೀರ್ಷಿಕೆ ಎಸ್.ಹೆಚ್.ಡಿ.ಪಿ ಪ್ಯಾಕೇಜ್ 329 ಎ2, ಬಿ ಮತ್ತು ಸಿ ಯೋಜನೆಯಡಿ ನಾಗಮಂಗಲ ತಾಲ್ಲೂಕಿನ ಮಂಡ್ಯ-ನಾಗಮಂಗಲ, ಕೋಳಾಲ-ತುರುವೇಕರೆ-ದಬ್ಬೆಘಟ, ಬೆಳ್ಳೂರಿ-ಹೊನ್ನೇನಹಳ್ಳಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಒಟ್ಟು ಪ್ಯಾಕೇಜ್ ಮೊತ್ತ ರೂ. 2940.00 ಲಕ್ಷಗಳು ಮಂಜೂರಾಗಿದ್ದು, ಸದರಿ ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದಿದ್ದರೂ ಸಹ ಇನ್ನೂ ಕಾಮಗಾರಿ ಪೂರ್ಣಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಗುಣಮಟ್ಟ ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಮೇಲ್ಕಂಡ ಪ್ಯಾಕೇಜ್‌ನಲ್ಲಿ ರೂ. 1800.00 ಲಕ್ಷ ಎರಡನೇ ಹಂತದ ಕಾಮಗಾರಿ ಇದುವರೆವಿಗೂ ಪ್ರಾರಂಭವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು ; ಕಳಪೆ ಕಾಮಗಾರಿ ಹಾಗೂ ವಿಳಂಬಕ್ಕೆ ಕಾರಣರಾದ ಗುತ್ತಿಗೆದಾರರು ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಕಾಮಗಾರಿ ವಿಳಂಬದಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)